**ಕರ್ನಾಟಕ ಸರ್ಕಾರ**

**ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: ಬಿಟಿಇ/01/ಇಸಿಎಸ್(2)/2018

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು-01,
ದಿನಾಂಕ:10-07-2018

ಸುತ್ತೋಲೆ

ವಿಷಯ: 2018 ರ ಮೇ/ಜೂನ್ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ/ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಶುಲ್ಕ ಪಾವತಿಸುವ ಕುರಿತು.

ಉಲ್ಲೇಖ:ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/01/ಇಸಿಎಸ್(2)/2018 ದಿ:06-07-2018

*******

ಮೇಲ್ಕಂಡ ವಿಷಯ ಸಂಬಂಧಿಸಿದಂತೆ, 2018 ರ ಮೇ/ಜೂನ್ ತಿಂಗಳನಲ್ಲಿ ನಡೆದ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನವಾದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆಯಲು ಮತ್ತು ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಇಚ್ಛಿಸುವ ವಿದ್ಯಾರ್ಥಿಗಳು ಖಜಾನೆ-II ಮೂಲಕ ನಿಗದಿತ ಶುಲ್ಕವನ್ನು ಪಾವತಿಸಲು ಉಲ್ಲೇಖಿತ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಆದರೆ ಖಜಾನೆ-II ವೆಬ್‌ಸೈಟ್‌ನ ಸರ್ವರ್‌ನಲ್ಲಿ ತಾಂತ್ರಿಕ ತೊಂದರೆಯಿರುವ ಕಾರಣ ಶುಲ್ಕ ಪಾವತಿಸಲು ಸಾಧ್ಯವಾಗುತ್ತಿಲ್ಲ ಎಂಬ ಅಂಶದ ಕಾರಣ ಶುಲ್ಕ ಪಾವತಿ ಸಾಧ್ಯವಾಗದೇ ಇದ್ದಲ್ಲಿ, ಅನುದಾನಿತ / ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳ ವಿದ್ಯಾರ್ಥಿಗಳು ಸದರಿ ಶುಲ್ಕವನ್ನು ಮಾತ್ರ ದಿನಾಂಕ: **11-07-2018 ರೊಳಗೆ** ಹತ್ತಿರದ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ ಪಾವತಿಸಲು ಸೂಚಿಸಲಾಗಿದೆ. **ಸದರಿ ಸರ್ಕಾರಿ ಪಾಲಿಟೆಕ್ನಿಕ್‌ಗಳು ಉತ್ತರ ಪತ್ರಿಕೆಗಳ ಫೋಟೋ ಪ್ರತಿ ಪಡೆಯಲು ಮತ್ತು ಮರು ಮೌಲ್ಯಮಾಪನಕ್ಕಾಗಿ ಶುಲ್ಕ ಪಾವತಿಸುವ ಪ್ರತಿ ವಿದ್ಯಾರ್ಥಿಗೂ ಪ್ರತ್ಯೇಕ ಪಾವತಿ ರಸೀದಿಯನ್ನು ನೀಡುವುದು.**

ವಿದ್ಯಾರ್ಥಿಗಳು ಶುಲ್ಕ ಪಾವತಿಯ ರಸೀದಿಯೊಂದಿಗೆ ಭರ್ತಿ ಮಾಡಿದ ಉತ್ತರ ಪತ್ರಿಕೆಗಳ ಫೋಟೋ ಪ್ರತಿ / ಮರು ಮೌಲ್ಯಮಾಪನದ ಅರ್ಜಿಗಳನ್ನು ತಮ್ಮ ಸಂಸ್ಥೆಯಲ್ಲಿಯೇ ದಿನಾಂಕ: **11-07-2018 ರೊಳಗೆ** ಸಲ್ಲಿಸುವುದು. ಸಂಸ್ಥೆಗಳು, ಸದರಿ ವಿದ್ಯಾರ್ಥಿಗಳ ಅರ್ಜಿಗಳಲ್ಲಿನ ವಿವರಗಳನ್ನು ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನ ಮೂಲಕ ಆನ್ ಲೈನ್‌ನಲ್ಲಿ ಭರ್ತಿ ಮಾಡಿ **ದಿನಾಂಕ: 11-07-2018 ರ ಸಂಜೆ 5.30** ಗಂಟೆಯೊಳಗೆ ಈ ಕಚೇರಿಗೆ ತಲುಪುವಂತೆ ಖುದ್ದಾಗಿ ಅಥವಾ ಅಂಚೆಯ ಮುಖಾಂತರ ಸಲ್ಲಿಸಲು ತಿಳಿಸಲಾಗಿದೆ. ನಂತರ ಬಂದಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿ/ಪೋಷಕರ ಗಮನಕ್ಕೆ ತಪ್ಪದೇ ತರಲು ಪ್ರಾಂಶುಪಾಲರಿಗೆ ಈ ಮೂಲಕ ತಿಳಿಸಲಾಗಿದೆ.

ಕಾರ್ಯದರ್ಶಿ

**ಇವರಿಗೆ,**

ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳ ಮಾಹಿತಿಗಾಗಿ ಮತ್ತು ಮುಂದಿನ ಕ್ರಮಕ್ಕಾಗಿ

ಪ್ರತಿ: 1) ಇ- ಆಡಳಿತ –ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

2) ಗಣಕ ಕೇಂದ್ರ – ವೆಬ್‌ಪೋರ್ಟಲ್/ www.btekarlinx.net ವೆಬ್‌ಸೈಟ್‌ನಲ್ಲಿ ಪ್ರಕಟಿಸಲು

3) ಕಾರ್ಯದರ್ಶಿಯವರು ಆಪ್ತ ಶಾಖೆ